24

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರದ ವತಿಯಿಂದ ಆಯೋಜಿಸಲ್ಪಡುವ ಅಧಿಕೃತ ಸಭೆ-ಸಮಾರಂಭಗಳಲ್ಲಿ ಮತ್ತು ಸರ್ಕಾರಿ ಕಛೇರಿಗಳಲ್ಲಿ ಏಕ ಕಾಲಿಕ ಬಳಕೆ (Single use) ಪ್ಲಾಸ್ಟಿಕ್ ನೀರಿನ ಬಾಟಲ್‌ಗಳ ಬಳಕೆ/ಸರಬರಾಜನ್ನು ನಿಷೇಧಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಅಧಿಸೂಚನೆ ಸಂಖ್ಯೆ:ಅಪಜೀ 17 ಇಪಿಸಿ 2012, ದಿನಾಂಕ:11.03.2016.

**ಪ್ರಸ್ತಾವನೆ:**

ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್‌ಗಳು ಹಾಗೂ ದೈನಂದಿನ ಬಳಕೆಯಲ್ಲಿರುವ ಇತರೆ ಪ್ಲಾಸ್ಟಿಕ್ ವಸ್ತುಗಳು ಅಲ್ಪಾವಧಿ ಹಾಗೂ ದೀರ್ಘಾಧಿಯಲ್ಲಿ ಪರಿಸರಕ್ಕೆ ಹಾನಿಯನ್ನು ಮತ್ತು ಆರೋಗ್ಯಕ್ಕೆ ಅಪಾಯವನ್ನು ಉಂಟುಮಾಡಲು ಕಾರಣವಾಗಿರುತ್ತವೆ. ಈ ಹಿನ್ನೆಯಲ್ಲಿ ಸರ್ಕಾರವು ಮೇಲೆ ಓದಲಾದ (1)ರ ಸರ್ಕಾರಿ ಅಧಿಸೂಚನೆಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯದ ನಿಯಂತ್ರಣಕ್ಕಾಗಿ ಈಗಾಗಲೇ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು ಮತ್ತಿತರ ವಸ್ತುಗಳ ತಯಾರಿಕೆ, ಮಾರಾಟ, ದಾಸ್ತಾನು ಮತ್ತು ಉಪಯೋಗವನ್ನು ನಿಷೇಧಿಸಿ ಅಧಿಸೂಚನೆ ಹೊರಡಿಸಲಾಗಿದೆ. ಆದರೆ, ಈ ನಿಷೇಧವು ಸಾಮಗ್ರಿಗಳ ಪ್ಯಾಕೇಜಿಂಗ್ ಮಾಡುವ ಸಂದರ್ಭದಲ್ಲಿ ಅವಿಭಾಜ್ಯವಾಗಿ (Integral part of package) ಬರುವ ಪ್ಲಾಸ್ಟಿಕ್‌ಗಳನ್ನು ಹೊರತುಪಡಿಸಿರುವುದರಿಂದ ಏಕ ಕಾಲಿಕ ಬಳಕೆ ಪ್ಲಾಸ್ಟಿಕ್ ನೀರಿನ ಬಾಟಲಿಗಳಿಗೆ (Single use packaged water bottles) ಅನ್ವಯವಾಗುವುದಿಲ್ಲ.

ಇಂತಹ ಬಾಟಲ್‌ಗಳ ಮೇಲೆ ನಿರ್ಬಂದವಿಲ್ಲದ್ದರಿಂದ ಏಕ ಕಾಲಿಕ ಬಳಕೆಯ ಪ್ಲಾಸ್ಟಿಕ್ ನೀರಿನ ಬಾಟಲ್‌ಗಳ ಬಳಕೆ ಯಥೇಚ್ಛವಾಗಿದ್ದು ಬಳಸಿದ ಪ್ಲಾಸ್ಟಿಕ್ ನೀರಿನ ಬಾಟಲುಗಳು ಎಲ್ಲೆಂದರಲ್ಲಿ ಎಸೆಯಲ್ಪಡುವುದರಿಂದ ಘನ ತ್ಯಾಜ್ಯದಲ್ಲಿ ಗಣನೀಯ ಪ್ರಮಾಣದಲ್ಲಿ ಸೇರಿ ಹಲವಾರು ಪರಿಸರಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಉಂಟು ಮಾಡುವುದರ ಜೊತೆಗೆ, ನಗರ ಪ್ರದೇಶಗಳಲ್ಲಿ ಅಹಿತಕರ ದೃಶ್ಯ ಸೃಷ್ಟಿಯಾಗುತ್ತಿರುತ್ತದೆ. ಇದಲ್ಲದೆ, ಸರ್ಕಾರದ ಸಭೆ-ಸಮಾರಂಭಗಳಲ್ಲಿ ಪ್ಲಾಸ್ಟಿಕ್ ಬಾಟಲಿಗಳಲ್ಲಿ ಸರಬರಾಜಾಗುವ ನೀರು ಹಲವಾರು ಸಂದರ್ಭಗಳಲ್ಲಿ ಅಲ್ಪ ಪ್ರಮಾಣದಲ್ಲಿ ಮಾತ್ರ ಬಳಕೆಯಾಗಿ ಹೆಚ್ಚಿನ ಪ್ರಮಾಣದ ನೀರು ವ್ಯರ್ಥವಾಗುತ್ತಿದೆ ಮತ್ತು ಇಂತಹ ನೀರಿನ ಬಾಟಲಿಗಳನ್ನು ಖರೀದಿಸುವುದರಿಂದ ರಾಜ್ಯದ ಬೊಕ್ಕಸಕ್ಕೆ ದುಬಾರಿ ಖರ್ಚು ಸಹ ಆಗುತ್ತಿರುತ್ತದೆ.

ಈ ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಹಾಗೂ ಸರ್ಕಾರಿ ಸ್ವಾಮ್ಯದ ಎಲ್ಲಾ ಸಂಸ್ಥೆಗಳಿಂದ ಆಯೋಜಿಸುವ ಸಭೆ-ಸಮಾರಂಭಗಳಲ್ಲಿ ಮತ್ತು ಸರ್ಕಾರಿ ಕಛೇರಿಗಳಲ್ಲಿ ಏಕ ಕಾಲಿಕ ಬಳಕೆಯ ಪ್ಲಾಸ್ಟಿಕ್ ಬಾಟಲಿಗಳಲ್ಲಿ (Single use packaged water bottles) ಪ್ಯಾಕ್ ಮಾಡಿದ ನೀರು ಸರಬರಾಜು/ಬಳಕೆ ಮಾಡುವುದನ್ನು ನಿಷೇಧಿಸಿ, ಉತ್ತಮ ಗುಣಮಟ್ಟದ ಕುಡಿಯುವ ನೀರನ್ನು ಶುಚಿತ್ವ ರೀತಿಯಲ್ಲಿ ಗ್ಲಾಸ್, ಸ್ಟೀಲ್, ಪೇಪರ್ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ಸರಬರಾಜು ಮಾಡುವುದನ್ನು ಉತ್ತೇಜಿಸುವುದು ಅಗತ್ಯವೆಂದು ತೀರ್ಮಾನಿಸಲಾಗಿದೆ.

ಅದರಂತೆ, ಈ ಕೆಳಕಂಡ ಆದೇಶ.

. . .2



Generated from eOffice by HARISH TJ, DPAR-POLS(AH), SENIOR ASSISTANT, DPAR on 07/06/2023 12:26 PM

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 83 ರಾಸವಿ 2018**
**ಬೆಂಗಳೂರು ದಿನಾಂಕ: 05.09.2018**

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಸರ್ಕಾರಿ ಹಾಗೂ ಸರ್ಕಾರಿ ಸ್ವಾಮ್ಯದ ಮಂಡಳಿ, ನಿಗಮ, ವಿಶ್ವವಿದ್ಯಾನಿಲಯಗಳು ಹಾಗೂ ಸರ್ಕಾರದಿಂದ ಅನುದಾನ ಪಡೆಯುವಂತಹ ಯಾವುದೇ ಸಂಸ್ಥೆಗಳ ವತಿಯಿಂದ ಏರ್ಪಡಿಸಲ್ಪಡುವ ಸಭೆ–ಸಮಾರಂಭಗಳಲ್ಲಿ ಏಕ ಕಾಲಿಕ ಬಳಕೆಯ ಪ್ಲಾಸ್ಟಿಕ್ ಬಾಟಲ್‌ನ (Single use packaged water bottles) ನೀರಿನ ಬಳಕೆ/ಸರಬರಾಜು ಮಾಡುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಿದೆ. ಇಂತಹ ಸಭೆ–ಸಮಾರಂಭಗಳಲ್ಲಿ ಕುಡಿಯುವ ನೀರನ್ನು ಸಂದರ್ಭಾನುಸಾರ ಶುಚಿತ್ವ ರೀತಿಯಲ್ಲಿ ಗ್ಲಾಸ್, ಸ್ಟೀಲ್, ಪೇಪರ್ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ಸರಬರಾಜು ಮಾಡಲು ಕ್ರಮ ವಹಿಸತಕ್ಕದ್ದು ಹಾಗೂ ಈ ಆದೇಶಕ್ಕೆ ಲಗತ್ತಿಸಿದ **ಅನುಬಂಧ–1** ರಲ್ಲಿರಿಸಿರುವಂತೆ ಸೂಕ್ತ ಸಾಮೂಹಿಕ ಕುಡಿಯುವ ನೀರು ವಿತರಣಾ ವ್ಯವಸ್ಥೆಯನ್ನು (Common drinking Water dispensing system) ಏರ್ಪಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ.ಎಸ್. ರೋಹಿಣಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ರಾಜಕೀಯ).

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರಿಗೆ ರವಾನಿಸುತ್ತಾ, ಈ ಆದೇಶವನ್ನು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ, ಅದರ 100 ಪ್ರತಿಗಳನ್ನು ಇಲಾಖೆಗೆ ಕಳುಹಿಸಿಕೊಡಬೇಕೆಂದು ಕೋರಲಾಗಿದೆ.

**ಪ್ರತಿ:**

1) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2) ಎಲ್ಲಾ ಇಲಾಖಾ ಮುಖ್ಯಸ್ಥರು.
3) ಸರ್ಕಾರದ ಎಲ್ಲಾ ನಿಗಮ/ಮಂಡಳಿಗಳ ಅಧ್ಯಕ್ಷರು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು/ವ್ಯವಸ್ಥಾಪಕ ನಿರ್ದೇಶಕರು ಹಾಗೂ ವಿಶ್ವವಿದ್ಯಾನಿಲಯಗಳ ಕುಲಪತಿಗಳು.
4) ಎಲ್ಲಾ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳು.
7) ಶಾಖಾ ರಕ್ಷಾ ಕಡತ.

Issued ... Dated 6/9/18
D.P.A.R.



Generated from eOffice by HARISH TJ, DPAR-POL&COORD(HJ), SENIOR ASSISTANT, DPAR on 20/06/2023 04:12:26 PM

22

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 83 ರಾಸವಿ 2018, ದಿನಾಂಕ: 05.09.2018ರ**

**ಅನುಬಂಧ – 1**

1. ಸರ್ಕಾರಿ ಹಾಗೂ ಸರ್ಕಾರಿ ಸ್ವಾಮ್ಯದ ಮಂಡಳಿ, ನಿಗಮ, ವಿಶ್ವವಿದ್ಯಾನಿಲಯಗಳು ಹಾಗೂ ಸರ್ಕಾರದಿಂದ ಅನುದಾನ ಪಡೆಯುವಂತಹ ಸಂಸ್ಥೆಗಳ ವತಿಯಿಂದ ಏರ್ಪಡಿಸಲ್ಪಡುವ ಸಭೆ-ಸಮಾರಂಭ, ಕಾರ್ಯಾಗಾರ, ಸೆಮಿನಾರ್, ಇತ್ಯಾದಿಗಳಲ್ಲಿ 20 ಲೀಟರ್ ಅಥವಾ ಅದಕ್ಕೂ ಹೆಚ್ಚಿನ ಸಾಮರ್ಥ್ಯದ ಕ್ಯಾನ್‌ಗಳಲ್ಲಿ ಶುದ್ಧೀಕರಿಸಿದ ಕುಡಿಯುವ ನೀರಿನ ವಿತರಣಾ ವ್ಯವಸ್ಥೆಯನ್ನು ಏರ್ಪಡಿಸತಕ್ಕದ್ದು.
2. ಕಚೇರಿಗಳಲ್ಲಿ ಸಾಮಾನ್ಯವಾಗಿ ಆಗಾಗ್ಗೆ ಸಭೆ-ಸಮಾರಂಭಗಳು ಏರ್ಪಡುವ ಸಮಿತಿ ಕೊಠಡಿಗಳು, ಕಾನ್ಫರೆನ್ಸ್ ಹಾಲ್‌ಗಳು ಇತ್ಯಾದಿ ಸಭಾಂಗಣಗಳಲ್ಲಿ ಕೇಂದ್ರ ಸರ್ಕಾರದ ಜಾಲತಾಣ https://gem.gov.in/ ರಲ್ಲಿ ಅನುಮೋದಿಸಲ್ಪಟ್ಟಿರುವ ಅಥವಾ ರಾಜ್ಯ ಸರ್ಕಾರದಿಂದ ಅಂಗೀಕರಿಸಲ್ಪಟ್ಟಿರುವ ಸಂಸ್ಥೆಗಳಿಂದ ಖರೀದಿಸಿದ RO ಮತ್ತು ನೀರು ಶುದ್ಧೀಕರಣ ಘಟಕಗಳನ್ನು ಅನುಸ್ಥಾಪಿಸಿ, ಗಾಜಿನ ಲೋಟ ಅಥವಾ ಸ್ಟೀಲ್ ಲೋಟ ಅಥವಾ ಪೇಪರ್ ಲೋಟ ಅಥವಾ ಇತರೆ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ನೀರು ಕುಡಿಯುವುದಕ್ಕೆ ವ್ಯವಸ್ಥೆ ಮಾಡುವುದು.
3. ಎಲ್ಲಾ ಸರ್ಕಾರಿ ಹಾಗೂ ಸರ್ಕಾರಿ ಸ್ವಾಮ್ಯದ ಮಂಡಳಿ, ನಿಗಮ, ವಿಶ್ವವಿದ್ಯಾನಿಲಯಗಳು ಹಾಗೂ ಸರ್ಕಾರದಿಂದ ಅನುದಾನ ಪಡೆಯುವಂತಹ ಸಂಸ್ಥೆಗಳ ಕಚೇರಿಗಳಲ್ಲಿ ಸಾರ್ವಜನಿಕರಿಗಾಗಿ ಶುದ್ಧ ಕುಡಿಯುವ ನೀರು ಸರಬರಾಜಿಗಾಗಿ ಕೇಂದ್ರ ಸರ್ಕಾರದ ಜಾಲತಾಣ https://gem.gov.in/ ರಲ್ಲಿ ಅನುಮೋದಿಸಲ್ಪಟ್ಟಿರುವ ಸಂಸ್ಥೆಗಳಿಂದ ಖರೀದಿಸಿದ ಅಥವಾ ಯಾವುದಾದರೂ ಉತ್ತಮ RO ಶುದ್ಧ ನೀರಿನ ಘಟಕಗಳನ್ನು ವ್ಯವಸ್ಥಾಪನೆಗೊಳಿಸುವುದು.



Generated from eOffice by HARISH TJ, DPAR-ROSARAS(HTJ), SENIOR ASSISTANT, DPAR on 27/06/2023 12:26 PM